# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : 1111 |
| 2. | ಸದಸ್ಯರ ಹೆಸರು | : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : 12.03.2026 |
| 4. | ಉತ್ತರಿಸುವ ಸಚಿವರು | : ಮುಖ್ಯಮಂತ್ರಿ |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇಲಾಖಾವಾರು ಪದೋನ್ನತಿಗಳನ್ನು ನೀಡಲು ಅಗತ್ಯವಾದ ವೃಂದ ಮತ್ತು ನೇಮಕಾತಿ (cadre & Recruitment) ನಿಯಮಗಳನ್ನು ಎಲ್ಲಾ ಇಲಾಖೆಗಳಲ್ಲಿ ಕಾಲೋಚಿತಗೊಳಿಸಲಾಗಿದೆಯೇ; ಬಾಕಿಯಿರುವ ಇಲಾಖೆಗಳಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು; | ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ಮತ್ತು ಅವುಗಳ ಅಧೀನದಲ್ಲಿನ ಕ್ಷೇತ್ರ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿಕೊಂಡಿರುತ್ತವೆ.<br><br>ಸರ್ಕಾರದ ಎಲ್ಲಾ ಇಲಾಖೆಗಳು ತಮ್ಮ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕನಿಷ್ಠ ಮೂರು ವರ್ಷಗಳಿಗೊಮ್ಮೆ ಪರಿಷ್ಕರಿಸುವಂತೆ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 97 ಸೇನಿಡಿ 2004, ದಿನಾಂಕ:08.10.2004 ರಲ್ಲಿ ತಿಳಿಸಲಾಗಿದೆ.<br><br>ಪ್ರತಿಯೊಂದು ಇಲಾಖೆಯು ತಮ್ಮ ಅಧೀನದಲ್ಲಿನ ಕ್ಷೇತ್ರ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಲು ಕ್ರಮವಹಿಸುತ್ತಿವೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಿದ್ದುಪಡಿ ಮಾಡಿ, ಈ ಹಿಂದೆ ರದ್ದುಗೊಂಡಿದ್ದ ಹುದ್ದೆಗಳಿಗೆ ಪುನ: ನೇಮಕಾತಿ ಮಾಡಿವೆ; ಅಂತಹ ಸಂದರ್ಭದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪೂರ್ವಾನುಮತಿ ಪಡೆಯಲಾಗಿದೆಯೇ; | ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ರದ್ದುಗೊಂಡಂತಹ ಹುದ್ದೆಗೆ ಪುನ: ನೇಮಕಾತಿ ಮಾಡಲು ಅವಕಾಶ ಇರುವುದಿಲ್ಲ.<br><br>ಒಂದುವೇಳೆ, ರದ್ದುಗೊಂಡ ಹುದ್ದೆಯನ್ನು ಸೃಜಿಸಬೇಕಾದಲ್ಲಿ ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆಯುವುದು ಅಗತ್ಯವಾಗಿರುತ್ತದೆ. |
| ಇ) | ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿಲ್ಲದ ಹುದ್ದೆಗಳಿಗೆ ನೇಮಕಾತಿ ಮಾಡಲು ಇಲಾಖೆಗಳಿಗೆ ಇರುವ ಅಧಿಕಾರ/ವಿಧಾನಗಳೇನು; ಹೊಸ ಹುದ್ದೆಗೆ ನೇಮಕಾತಿ ಮಾಡಿದ ಬಳಿಕ ಎಷ್ಟು ಅವಧಿಯೊಳಗೆ ಆ ಹುದ್ದೆಯನ್ನು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಳ್ಳಬೇಕಾಗಿದೆ; | ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಒಳಗೊಂಡಿರದ ಹುದ್ದೆಗಳಿಗೆ ನೇಮಕಾತಿ ಮಾಡಲು ಅವಕಾಶವಿರುವುದಿಲ್ಲ.<br><br>ಹೊಸದಾಗಿ ಸೃಜಿಸಿರುವ ಹುದ್ದೆಗಳಿಗೆ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978 ರಡಿ ನಿಗಧಿಪಡಿಸಿರುವ ಕ್ರಮದನ್ವಯ ನೇಮಕಾತಿ ವಿಧಾನವನ್ನು ನಿಗಧಿಪಡಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಸಾಕಷ್ಟು ಕಾಲಾವಕಾಶದ ಅವಶ್ಯಕತೆ ಇರುವ ಕಾರಣ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸುವುದನ್ನು ಕಾಯ್ದಿರಿಸಿ ಹೊಸದಾಗಿ ಸೃಜನೆಯಾದ ಹುದ್ದೆಗಳಿಗೆ ಹಾಗೂ ನಿಯಮಗಳನ್ನು ರೂಪಿಸದಿರುವ ಹುದ್ದೆಗಳಿಗೆ ಕಾರ್ಯಕಾರಿ ಆದೇಶಗಳನ್ನು ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಹೊರಡಿಸಲು ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 38 ಸೇನಿಇ 96, ದಿನಾಂಕ:01.08.1996 ರಲ್ಲಿ ಅವಕಾಶ ನೀಡಲಾಗಿತ್ತು. |
| ಈ) | ಮೇಲ್ಕಂಡ ನಿಯಮಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಂದಾಯ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಯಲ್ಲಿ ಸಮರ್ಪಕವಾಗಿ ಪಾಲನೆಯಾಗಿದೆಯೇ; ಈ ಇಲಾಖೆಗಳಲ್ಲಿ ಯಾವ ಯಾವ ಹುದ್ದೆಗಳಿಗೆ ಈ ರೀತಿಯ ನೇಮಕಾತಿ ಮಾಡಲಾಗಿದೆ; | ಪ್ರಸ್ತುತ, ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವ ಸಂದರ್ಭದಲ್ಲಿ ಸರ್ಕಾರದ ವಿವಿಧ ಇಲಾಖೆಗಳು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸರ್ಕಾರದಿಂದ ಸಮಗ್ರ ಮಾರ್ಗಸೂಚಿಗಳನ್ನು ನೀಡಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 48 ಸೇನಿಡಿ 2023, ದಿನಾಂಕ:06.08.2025 ರನ್ವಯ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 38 ಸೇನಿಇ 96, ದಿನಾಂಕ:01.08.1996ನ್ನು ಹಿಂಪಡೆಯಲಾಗಿದೆ. |

| | | |
|---|---|---|
| | | ಪ್ರಸ್ತುತ ಎಲ್ಲಾ ಇಲಾಖೆಗಳು ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ಹೊಸದಾಗಿ ಸೃಜಿಸಿದ ಹುದ್ದೆಯನ್ನು, ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ನೇಮಕಾತಿಯನ್ನು ಕೈಗೊಳ್ಳಬೇಕಾಗಿರುತ್ತದೆ.<br><br>ಮೇಲ್ಕಂಡ ನಿಯಮಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಂದಾಯ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಯಲ್ಲಿ ಪಾಲನೆಯಾಗಿರುತ್ತದೆ. |
| ಊ) | ನಿರ್ದಿಷ್ಟ ಹುದ್ದೆಗೆ ನೇರ ನೇಮಕಾತಿಯ ಸಂದರ್ಭದಲ್ಲಿ ದಾಖಲಾತಿ ಪರಿಶೀಲನೆಗೆ ಹಾಜರಾಗದ, ವಿವಿಧ ಕಾರಣಗಳಿಗಾಗಿ ನೇಮಕಾತಿ ಆದೇಶ ನೀಡದ ಅಥವಾ ನೇಮಕಾತಿ ಆದೇಶ ಪಡೆದ ಬಳಿಕ ಕರ್ತವ್ಯಕ್ಕೆ ಹಾಜರಾಗದ ಅಭ್ಯರ್ಥಿಗಳ ಬದಲಿಗೆ ಮೆರಿಟ್ ಪಟ್ಟಿಯಲ್ಲಿರುವ ಮುಂದಿನ ಅಭ್ಯರ್ಥಿಗಳನ್ನು ನೇಮಕ ಮಾಡಿದಲ್ಲಿ, ಅವರ ಜೇಷ್ಠತೆಯನ್ನು ಯಾವ ಅನುಕ್ರಮದಲ್ಲಿ ನಿಗದಿಪಡಿಸಲಾಗುತ್ತದೆ; ಈ ಕುರಿತು ಜಾರಿಯಲ್ಲಿರುವ ನಿಯಮಗಳೇನು; ಎಷ್ಟು ಇಲಾಖೆಗಳಲ್ಲಿ ಇಂತಹ ಸಮಸ್ಯೆಗಳು ಉದ್ಭವಿಸಿವೆ; ಈ ಕುರಿತು ಸರ್ಕಾರ ಪ್ರಮಾಣೀಕೃತ ಕಾರ್ಯವಿಧಾನವನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು? | ಕರ್ನಾಟಕ ನಾಗರಿಕ ಸೇವಾ (ನೇರನೇಮಕಾತಿ) (ಸಾಮಾನ್ಯ) ನಿಯಮಗಳು, 2021 ರ ನಿಯಮ 12ರಲ್ಲಿ, 11ನೇ ನಿಯಮದ (2)ನೇ ಉಪ ನಿಯಮದ ಮೇರೆಗೆ ಆಯ್ಕೆ ಪಟ್ಟಿಯಲ್ಲಿ ಹೆಸರುಗಳನ್ನು ಒಳಗೊಂಡಿರುವ ಅಭ್ಯರ್ಥಿಗಳ ಆಯ್ಕೆ ಪಟ್ಟಿಯಲ್ಲಿ ಅವರ ಹೆಸರುಗಳು (ಗಳಿಸಿರುವ ಅಂಕಗಳು) ಇರುವ ಕ್ರಮದಲ್ಲಿ ನೇಮಕಾತಿ ಮಾಡಲು ಆಸ್ಪದ ಕಲ್ಪಿಸಲಾಗಿದೆ.<br><br>ಸದರಿ ನಿಯಮದ 11ನೇ ನಿಯಮದ (3)ನೇ ಉಪನಿಯಮದನ್ವಯ ಸೇರಿಕೆ ಸಮಯವನ್ನು ನಿರ್ದಿಷ್ಟಪಡಿಸಿದ ಅಥವಾ ಸಂದರ್ಭಾನುಸಾರ ವಿಸ್ತರಿಸಿದ ಕಾಲಾವಧಿಯ ಒಳಗಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿರುವ ಅಂತಿಮ ಪಟ್ಟಿಯಲ್ಲಿ ಸೇರಿದ ಅಭ್ಯರ್ಥಿಗಳಿಗೆ ಅನ್ವಯವಾಗುವಂತೆ, ನೇಮಕಾತಿ ಪ್ರಾಧಿಕಾರವು, ಆಯ್ಕೆ ಪ್ರಾಧಿಕಾರವು ಸಿದ್ಧಪಡಿಸಿದ ಹೆಚ್ಚುವರಿ ಪಟ್ಟಿಯಿಂದ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅಂತಹ ಸಂದರ್ಭದಲ್ಲಿ, ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಯನ್ನು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿರುವ ಅಭ್ಯರ್ಥಿಯು ಆಯ್ಕೆಯಾಗಿದ್ದ ನೇರ ಮತ್ತು ಸಮತಳ ಮೀಸಲಾತಿಯ ಅದೇ ವರ್ಗಕ್ಕೆ ಸೇರಿಸತಕ್ಕದ್ದು ಎಂದು ತಿಳಿಸಲಾಗಿರುತ್ತದೆ.<br><br>ಮುಂದುವರೆದು, ಮುಖ್ಯ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡ ನಂತರದಲ್ಲಿ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಚಾಲನೆಗೊಳಿಸಿ ಆಯಾ ಪ್ರವರ್ಗಕ್ಕೆ ಸೇರಿದ ಅಭ್ಯರ್ಥಿಗಳನ್ನು ಹೆಚ್ಚುವರಿ ಪಟ್ಟಿಯ ಮೂಲಕ ಆಯ್ಕೆ ಮಾಡಿ ಸದರಿ ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದರಿಂದ ಮುಖ್ಯ ಆಯ್ಕೆಪಟ್ಟಿಯಲ್ಲಿನ ಅಭ್ಯರ್ಥಿಗಳು ಸೇವಾ ಜೇಷ್ಠತೆಯಲ್ಲಿ ಹಿರಿಯರಾಗುತ್ತಾರೆ. ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳು ಸೇವಾ ಜೇಷ್ಠತೆಯಲ್ಲಿ ಕಿರಿಯರಾಗಿರುತ್ತಾರೆ. |

**ಸಂಖ್ಯೆ: ಸಿಆಸುಇ 49 ಸೇನಿಡಿ 2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ